# ಕರ್ನಾಟಕ ವಿಧಾನಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1258 |
| ಸದಸ್ಯರ ಹೆಸರು | : | ಶ್ರೀ ಮಂಜುನಾಥ ಭಂಡಾರಿ( ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 29/12/2022 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕರ್ನಾಟಕದಲ್ಲಿರುವ ಗಾಂಧಿ ಭವನಗಳೆಷ್ಟು; ಗಾಂಧಿ ಭವನಗಳ ನಿರ್ವಹಣೆಗೆ ಸರ್ಕಾರ ಅನುದಾನ ನೀಡುತ್ತಿದೆಯೇ; ನೀಡುತ್ತಿದ್ದಲ್ಲಿ, ಎಷ್ಟು ಮೊತ್ತವನ್ನು ನೀಡುತ್ತಿದೆ; (ವಿವರ ನೀಡುವುದು) | ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಕರ್ನಾಟಕ ರಾಜ್ಯದ ಪ್ರತಿ ಜಿಲ್ಲಾ ಕೇಂದ್ರಗಳಲ್ಲಿ ಗಾಂಧಿಭವನಗಳನ್ನು ನಿರ್ಮಿಸಲು ತಾತ್ವಿಕ ಅನುಮೋದನೆ ನೀಡಲಾಗಿದೆ. ಒಟ್ಟು 30 ಜಿಲ್ಲಾ ಕೇಂದ್ರಗಳಲ್ಲಿ ಗಾಂಧಿ ಭವನಗಳನ್ನು ನಿರ್ಮಿಸಲಾಗುತ್ತಿದ್ದು, ಗಾಂಧಿ ಭವನಗಳ ನಿರ್ವಹಣೆಯ ಜವಾಬ್ದಾರಿಯನ್ನು ಸ್ಥಳೀಯ ಜಿಲ್ಲಾಡಳಿತಗಳಿಗೆ ವಹಿಸಲು ಪರಿಶೀಲಿಸಲಾಗುತ್ತಿದೆ. |
| (ಆ) | ಈಗಾಗಲೇ ಇರುವ ಗಾಂಧಿ ಭವನಗಳನ್ನು ಯಾವ ಯಾವ ಉದ್ದೇಶಗಳಿಗೆ ಬಳಸಲಾಗುತ್ತಿದೆ; ಈ ಕುರಿತು ಜಾರಿಯಲ್ಲಿರುವ ನಿಯಮ ಗಳೇನು; (ವಿವರ ನೀಡುವುದು) | 2016-17ನೇ ಸಾಲಿನ ಆಯವ್ಯಯ ಘೋಷಣೆಯಂತೆ ಮಹಾತ್ಮ ಗಾಂಧೀಜಿಯವರ ತತ್ವ ಸಿದ್ಧಾಂತ ವಿಚಾರ ಧಾರೆಗಳನ್ನು ಇಂದಿನ ಯುವ ಜನತೆಗೆ ಪ್ರಚುರಪಡಿಸಲು ಅನುಕೂಲವಾಗುವಂತೆ ಗಾಂಧಿ ಭವನಗಳನ್ನು ನಿರ್ಮಿಸಲಾಗುತ್ತಿದೆ. ಸರ್ಕಾರದ ಆದೇಶ ಸಂ.ಕಸಂವಾ 16 ವಾಪ್ರಪ 2016 ದಿನಾಂಕ:23/12/2016 ರಲ್ಲಿ ಗಾಂಧಿ ಭವನಗಳ ನಿರ್ಮಾಣ ಕುರಿತಾದ ಹಾಗೂ ಕಾರ್ಯ ಚಟುವಟಿಕೆಗಳ ಬಗ್ಗೆ ಸಲಹೆ ಪಡೆಯಲು ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ರಾಜ್ಯ ಮಟ್ಟದ ಉನ್ನತ ಸಮಿತಿಯನ್ನು ರಚಿಸಲಾಗಿದೆ. |
| (ಇ) | ಉಡುಪಿ ಹಾಗೂ ದಕ್ಷಿಣ ಜಿಲ್ಲೆಗಳಲ್ಲಿ ಇರುವ ಗಾಂಧಿ ಭವನಗಳೆಷ್ಟು; ಅವು ಎಲ್ಲೆಲ್ಲಿ ಇವೆ; (ವಿವರ ನೀಡುವುದು) | ಉಡುಪಿ ಜಿಲ್ಲೆಯಲ್ಲಿ 01 ಹಾಗೂ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 01 ಗಾಂಧಿ ಭವನಗಳ ನಿರ್ಮಾಣಕ್ಕೆ ತಾತ್ವಿಕ ಅನುಮೋದನೆ ನೀಡಲಾಗಿದೆ. ಉಡುಪಿ ಜಿಲ್ಲೆಯಲ್ಲಿ ಉಡುಪಿ ತಾಲ್ಲೂಕು, ಮೂಡ ನಿಡಂಬೂರಿನಲ್ಲಿ ನಿವೇಶನ ಮಂಜೂರಾಗಿದ್ದು, ನಿರ್ಮಾಣ ಕಾಮಗಾರಿ ಪ್ರಾರಂಭವಾಗಬೇಕಿದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಿವೇಶನ ಮಂಜೂರಾತಿಗೆ ಜಿಲ್ಲಾಡಳಿತ ಕ್ರಮವಹಿಸುತ್ತಿದೆ. |
| (ಈ) | ಪ್ರಸ್ತುತ ಉಡುಪಿ ಹಾಗೂ ದಕ್ಷಿಣ ಜಿಲ್ಲೆಗಳಲ್ಲಿ ಗಾಂಧಿಭವನ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ; ಹಾಗಿದ್ದಲ್ಲಿ, ಯಾವ ಪ್ರದೇಶದಲ್ಲಿ ನಿರ್ಮಿಸಲು ಉದ್ದೇಶಿಸಲಾಗಿದೆ; (ವಿವರ ನೀಡುವುದು) | ಪ್ರಸ್ತುತ ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಗಾಂಧಿ ಭವನ ನಿರ್ಮಿಸಲು ಕ್ರಮವಹಿಸಲಾಗುತ್ತಿದ್ದು, ಉಡುಪಿ ಜಿಲ್ಲೆಯಲ್ಲಿ ಉಡುಪಿ ತಾಲ್ಲೂಕು ಮೂಡ ನಿಡಂಬೂರು ಸರ್ವೆ ನಂಬರ್ 144 ರಲ್ಲಿ ನಿವೇಶನ ಮಂಜೂರಾಗಿದ್ದು, ನಿರ್ಮಾಣ ಕಾರ್ಯ ಆರಂಭಿಸಲು ಕ್ರಮ ವಹಿಸಲಾಗಿದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒದಗಿಸಿರುವ ನಿವೇಶನದಲ್ಲಿ ತಕರಾರು ಇರುವುದರಿಂದ ಬೇರೆ ನಿವೇಶನದ ಮಂಜೂರಾತಿಗೆ ಜಿಲ್ಲಾಡಳಿತ ಕ್ರಮವಹಿಸುತ್ತಿದೆ. |

| | | |
|---|---|---|
| (ಉ) | ಗಾಂಧಿ ಭವನಗಳ ನಿರ್ಮಾಣಕ್ಕೆ ಸ್ಥಳಾವಕಾಶ ಮತ್ತು ಅನುದಾನ ವನ್ನು ಸರ್ಕಾರವು ನೀಡುತ್ತಿದೆಯೇ? (ವಿವರ ನೀಡುವುದು) | ಗಾಂಧೀಜಿಯವರ ವಿಚಾರಧಾರೆಗಳನ್ನು ಪ್ರಚುರ ಪಡಿಸಲು ಪ್ರತೀ ಜಿಲ್ಲಾ ಕೇಂದ್ರಗಳಲ್ಲಿ ತಲಾ ರೂ. 3.00ಕೋಟಿ ವೆಚ್ಚದಲ್ಲಿ ಗಾಂಧಿ ಭವನಗಳನ್ನು ನಿರ್ಮಿಸಲು ತಾತ್ವಿಕ ಅನುಮೋದನೆ ನೀಡಲಾಗಿದ್ದು, ಈವರೆಗೆ 05 ಜಿಲ್ಲೆಗಳಲ್ಲಿ ನಿರ್ಮಾಣ ಕಾರ್ಯ ಪೂರ್ಣಗೊಂಡಿದೆ ಮತ್ತು 07 ಜಿಲ್ಲೆಗಳಲ್ಲಿ ನಿವೇಶನ ಮಂಜೂರಾತಿ ಹಂತದಲ್ಲಿದೆ. ಉಳಿದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಕಟ್ಟಡ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ. |

**KCI-PIP/254/2022**

**(ಬಸವರಾಜ ಬೊಮ್ಮಾಯಿ)**
**ಮುಖ್ಯಮಂತ್ರಿ**